# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 2–12–2014

**ಪತ್ರಿಕಾ ಆಮಂತ್ರಣ**

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ವಿಶ್ವ ವಿಕಲಚೇತನರ ದಿನಾಚರಣೆ:<br>"ಸುಸ್ಥಿರ ಅಭಿವೃದ್ಧಿ: ತಂತ್ರಜ್ಞಾನದ ಭರವಸೆ"<br>ಉದ್ಘಾಟನೆ:<br><br>ಶ್ರೀಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ<br><br>ಅಧ್ಯಕ್ಷತೆ:<br><br>ಶ್ರೀ ಆರ್. ರೋಷನ್ ಬೇಗ್,<br>ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಖಾತೆ ಸಚಿವರು.<br><br>ಪ್ರಶಸ್ತಿ ಪ್ರದಾನ:<br><br>ಶ್ರೀಮತಿ ಉಮಾಶ್ರೀ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು. | 03–12–2014<br>ಬುಧವಾರ<br>ಬೆಳಗ್ಗೆ<br>10–00 ಗಂಟೆಗೆ | ಕಂಠೀರವ ಒಳಾಂಗಣ ಕ್ರೀಡಾಂಗಣ,<br>ಬೆಂಗಳೂರು |
| 2. | ಪತ್ರಿಕಾಗೋಷ್ಠಿ:<br><br>ಶ್ರೀ ಕೃಷ್ಣ ಬೈರೇಗೌಡ,<br>ಕೃಷಿ ಸಚಿವರು | 03–12–2014<br>ಬುಧವಾರ<br>ಮಧ್ಯಾಹ್ನ<br>1–30 ಗಂಟೆಗೆ | ಕೊಠಡಿ ಸಂಖ್ಯೆ 245<br>ಎರಡನೇ ಮಹಡಿ,<br>ವಿಕಾಸಸೌಧ,<br>ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ : ಆಮಂತ್ರಣ ಪತ್ರ ಪಡೆಯಿರಿ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಈ ವರ್ಷದ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆಯನ್ನು ಡಿಸೆಂಬರ್ 5 ರ ಸಂಜೆ 4-15 ಗಂಟೆಗೆ ಬೆಂಗಳೂರಿನ ರಾಜಭವನದಲ್ಲಿ ಏರ್ಪಡಿಸಲಾಗಿದೆ. ಮಾಜಿ ಸೈನಿಕರು ಹೆಚ್ಚಿನ ಸಂಖ್ಯೆಯಲ್ಲಿ ಈ ಸಮಾರಂಭದಲ್ಲಿ ಪಾಲ್ಗೊಳ್ಳುವಂತೆ ವಿನಂತಿಸಲಾಗಿದೆ.

ಈ ಸಮಾರಂಭದಲ್ಲಿ ಪಾಲ್ಗೊಳ್ಳಲು ಇಚ್ಛಿಸುವವರು ಬೆಂಗಳೂರಿನ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ರಸ್ತೆಯಲ್ಲಿರುವ ನಂ 58, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಭವನದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಕಾರ್ಯಾಲಯದಲ್ಲಿ ಆಮಂತ್ರಣ ಪತ್ರಿಕೆಯನ್ನು ಪಡೆಯಬಹುದಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮ:ಬಾಬು:ಜಿಪಿಆರ್.

# ಕುರಿ ಸಾಕಾಣಿಕೆ/ಕಂಬಳಿ ನೇಕಾರಿಕೆಗೆ ಸಾಲ ಮತ್ತು ಸಹಾಯಧನಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರವು ಕುರಿ ಸಾಕಾಣಿಕೆ/ಕಂಬಳಿ ನೇಕಾರರಿಗೆ ಸಾಲ ಮತ್ತು ಸಹಾಯಧನ ಮಂಜೂರು ಮಾಡುವ ಯೋಜನೆಯ ಮಾರ್ಗಸೂಚಿಗಳಿಗೆ ಅನುಮೋದನೆ ನೀಡಿದೆ. ಈ ಯೋಜನೆಯಲ್ಲಿ 23 ಕುರಿಗಳೂ ಮತ್ತು 2 ಟಗರು ಕೊಳ್ಳಲು ಆರ್ಥಿಕ ಸಹಾಯ ಒದಗಿಸಲಾಗುವುದು. ಈ ಯೋಜನೆಯ ಘಟಕ ವೆಚ್ಚ ರೂ 1.00 ಲಕ್ಷಗಳು ಆಗಿರುತ್ತದೆ. ಈ ಮೊತ್ತದಲ್ಲಿ ಗರಿಷ್ಠ ರೂ. 10,000/- ಗಳ ಸಹಾಯಧನ ಹಾಗೂ ರೂ. 90,000/- ಗಳ ಸಾಲ ಒಳಗೊಂಡಿದೆ. ಸಾಲಕ್ಕೆ ವಾರ್ಷಿಕ ಶೇ 4 ರ ಬಡ್ಡಿಯನ್ನು ವಿಧಿಸಲಾಗುವುದು.

ಈ ಯೋಜನೆಯಲ್ಲಿ ಸೌಲಭ್ಯ ಪಡೆಯಲು ಇಚ್ಛಿಸುವವರು ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು 2ಎಗೆ ಸೇರಿದವರಾಗಿರಬೇಕು. ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯವು ಗ್ರಾಮಾಂತರ ಪ್ರದೇಶದವರಿಗೆ ರೂ 40,000/- ಗಳು ಹಾಗೂ ನಗರ/ಪಟ್ಟಣ ಪ್ರದೇಶದವರಿಗೆ ರೂ. 55,000/- ಗಳ ಮಿತಿಯೊಳಗಿರಬೇಕು.

ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ 164.109.133.69/dbcdc2/ ನಲ್ಲಿ ಪಡೆಯಬಹುದು. ಆಯಾ ಜಿಲ್ಲೆಯ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿಯಲ್ಲಿ ನಿಗದಿತ ಅರ್ಜಿ ನಮೂನೆಗಳನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿಮಾಡಿದ ಅರ್ಜಿಗಳನ್ನು ಸಲ್ಲಿಸಲು ಡಿಸೆಂಬರ್ 20 ಕೊನೆಯ ದಿನವಾಗಿದೆ ಎಂದು ನಿಗಮದ ಪ್ರಕಟಣೆ ತಿಳಿಸಿದೆ.

ಸಮ:ಬಾಬು:ಜಿಪಿಆರ್.

## ಆಯೋಗದ ಅವಧಿ ವಿಸ್ತರಣೆ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಬೆಂಗಳೂರಿನ ನಗರ ಸಿವಿಲ್ ನ್ಯಾಯಾಲಯದ ಬಳಿ 2012 ರ ಮಾರ್ಚ್ 2 ರಂದು ನಡೆದ ಗಲಭೆಗಳ ವಿಚಾರಣೆಗಾಗಿ ನೇಮಿಸಿದ್ದ ನ್ಯಾಯಮೂರ್ತಿ ಶ್ರೀ ಆರ್. ಜಿ. ವೈದ್ಯನಾಥ ಏಕಸದಸ್ಯ ವಿಚಾರಣಾ ಆಯೋಗದ ಅವಧಿಯನ್ನು ಡಿಸೆಂಬರ್ 31 ರವರಗೆ ವಿಸ್ತರಿಸಿ ರಾಜ್ಯಪಾಲರು ಆದೇಶ ಹೊರಡಿಸಿದ್ದಾರೆ.

ಸಮ:ಬಾಬು:ಜಿಪಿಆರ್.

## ಪಂಡಿತ ರಾಮನಾರಾಯಣ ಅವರಿಗೆ
## ಟಿ. ಚೌಡಯ್ಯ ರಾಷ್ಟ್ರೀಯ ಪ್ರಶಸ್ತಿ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಹಿಂದೂಸ್ಥಾನಿ ವಾದ್ಯ ಸಂಗೀತ ಕ್ಷೇತ್ರದಲ್ಲಿನ ಸಾಧನೆ ಹಾಗೂ ವಿದ್ವಾತ್ತು ಹಾಗೂ ಸಂದ ಪ್ರಶಸ್ತಿ ಇವುಗಳನ್ನು ಪರಿಗಣಿಸಿ 2013 ನೇ ಸಾಲಿನ ಟಿ. ಚೌಡಯ್ಯ ರಾಷ್ಟ್ರೀಯ ಪ್ರಶಸ್ತಿಯನ್ನು ಮುಂಬೈನ ಪಂಡಿತ ರಾಮನಾರಾಯಣ ಅವರಿಗೆ ರಾಜ್ಯ ಸರ್ಕಾರ ಪ್ರಕಟಿಸಿದೆ.

ಸಮ:ಬಾಬು:ಜಿಪಿಆರ್

## ಅಧಿಕಾರ ಸ್ವೀಕಾರ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಜವಳಿ ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತದ ಉಪಾಧ್ಯಕ್ಷರನ್ನಾಗಿ ಬಳ್ಳಾರಿಯ ಶ್ರೀಮತಿ ಜಿ. ಕಮಲ ಮರಿಸ್ವಾಮಿ ಅವರನ್ನು ರಾಜ್ಯ ಸರ್ಕಾರವು ನೇಮಿಸಿದ್ದು, ಅವರು ಅಧಿಕಾರ ವಹಿಸಿಕೊಂಡಿರುತ್ತಾರೆ ಎಂದು ನಿಗಮದ ಪ್ರಕಟಣೆ ತಿಳಿಸಿದೆ.

ಸಮ:ಬಾಬು:ಜಿಪಿಆರ್.

## ವಿಜ್ಞಾನ ಪ್ರದರ್ಶನ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

"ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಂಸ್ಥೆಯು ಜವಾಹರ್‌ಲಾಲ್ ನೆಹರು ತಾರಾಲಯದಲ್ಲಿ "ಸೈನ್ಸ್ ಇನ್ ಆಕ್ಷನ್" ಎಂಬ ಮೂರು ದಿನಗಳ ವಿಜ್ಞಾನ ಪ್ರದರ್ಶನವನ್ನು ಡಿಸೆಂಬರ್ 5 ರಿಂದ 7 2014 ರವರೆಗೆ ಆಯೊಜಿಸಿದೆ. ಈ ಸಂದರ್ಭದಲ್ಲಿ ವಿವಿಧ ವೈಜ್ಞಾನಿಕ ವಿಷಯಗಳನ್ನೊಳಗೊಂಡ ಸುಮಾರು 25 ಪ್ರಯೋಗಗಳನ್ನು ಪ್ರದರ್ಶಿಸಲಾಗುತ್ತದೆ."

ಈ ಪ್ರದರ್ಶನವು ಬೆಳಿಗ್ಗೆ 10-30 ರಿಂದ 4-30 ಗಂಟೆವರೆಗೆ ಸಾರ್ವಜನಿಕರಿಗೆ ಲಭ್ಯವಿರುತ್ತದೆ. ಪ್ರದರ್ಶನದ ಪ್ರವೇಶ ಉಚಿತ, ಹೆಚ್ಚಿನ ಮಾಹಿತಿಗಾಗಿ 2237 9725/2226 6084 ಅಥವಾ **www.taralaya.org** ಅನ್ನು ಸಂಪರ್ಕಿಸಲು ಕೋರಿದೆ.

ಸಮ:ಬಾಬು:ಜಿಪಿಆರ್.

## ಪರಿಷ್ಕೃತ ಕೀ ಉತ್ತರ ಪ್ರಕಟ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ವಾರ್ತಾ ಇಲಾಖೆಯಲ್ಲಿನ ಹಿರಿಯ ಸಹಾಯಕ ನಿರ್ದೇಶಕರ 05 ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ಸಾಮಾನ್ಯ ಅಧ್ಯಯನ (ಪತ್ರಿಕೆ-1) ಹಾಗೂ ನಿರ್ದಿಷ್ಟ ಪತ್ರಿಕೆ (ಪತ್ರಿಕೆ-2) ಗಳ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ 07-10-2014 ರಂದು ಪ್ರಕಟಿಸಲಾಗಿದ್ದು, 17-10-2014 ರೊಳಗೆ ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಅಭ್ಯರ್ಥಿಗಳಿಗೆ ಸೂಚಿಸಲಾಗಿತ್ತು. ಕೀ ಉತ್ತರಗಳಿಗೆ ನಿಗದಿಪಡಿಸಿದ ದಿನಾಂಕದೊಳಗಾಗಿ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರಿಗೆ ನೀಡಿ, ಅವರ ಸಲಹೆಯಂತೆ ನಿರ್ದಿಷ್ಟ ಪತ್ರಿಕೆಯ ಪರಿಷ್ಕೃತ ಕೀ ಉತ್ತರಗಳನ್ನು ಆಯೋಗದ ವೆಬ್‌ಸೈಟ್ **"http://kpsc.kar.nic.in/Key Answers"** ನಲ್ಲಿ ಪ್ರಕಟಿಸಲಾಗಿದೆ.

ಪರಿಷ್ಕೃತ ಕೀ ಉತ್ತರಗಳ ಪ್ರಕಟಣೆಯ ನಂತರ ಕೀ ಉತ್ತರಗಳ/ಪರಿಷ್ಕೃತ ಕೀ ಉತ್ತರಗಳ ಕುರಿತಂತೆ ಅಭ್ಯರ್ಥಿಗಳಿಂದ ಯಾವುದೇ ಮನವಿಗಳು/ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಮ:ಬಾಬು:ಜಿಪಿಆರ್.

## ಗುತ್ತಿಗೆದಾರರ ನೋಂದಣಿ, ನವೀಕರಣಕ್ಕೆ ಆನ್‌ಲೈನ್ ಅರ್ಜಿ ಸಲ್ಲಿಸಿ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಲ್ಲಿನ "ಗುತ್ತಿಗೆದಾರರ ನೋಂದಣಿ ಮತ್ತು ನವೀಕರಣದ ಆನ್‌ಲೈನ್ ಅರ್ಜಿಗಳನ್ನು ಸ್ವೀಕರಿಸುವ ಸೇವೆಗೆ ದಿನಾಂಕ: 20-11-2014

ರಂದು ಲೋಕೋಪಯೋಗಿ ಸಚಿವರು ಚಾಲನೆ ನೀಡಿದ್ದು, ಅದರಂತೆ ಗುತ್ತಿಗೆದಾರರು ನೊಂದಣಿ/ನವೀಕರಣಕ್ಕಾಗಿ ಇಲಾಖೆಯ ವೆಬ್‌ಸೈಟ್ www.kpwd.gov.in ಮುಖಾಂತರ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಇಲಾಖೆಯ ಮುಖ್ಯ ಇಂಜಿನಿಯರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮ/ಬಾಬು/ಕೆಎಂ

# ಲೆಕ್ಕಪರಿಶೋಧನೆಗೆ ಸೂಚನೆ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಬೆಂಗಳೂರು ಜಿಲ್ಲೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಹಕಾರ ಸಂಘಗಳು ಹಾಗೂ ಸೌಹಾರ್ದ ಸಹಕಾರಿಗಳು ಕರ್ನಾಟಕ ಸಹಕಾರ ಸಂಘಗಳ ಕಾಯಿದೆ 2014-15 ನೇ ಸಾಲಿನ ಲೆಕ್ಕಪರಿಶೋಧನೆಯನ್ನು ಆಗಸ್ಟ್ -2015 ರೊಳಗೆ ಕಡ್ಡಾಯವಾಗಿ ಪೂರೈಸಿಕೊಳ್ಳಬೇಕಾಗಿರುತ್ತದೆ. ಆದ್ದರಿಂದ ಇಲಾಖೆಯ http://www.sahakaradarpana.kar.nic.in ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಅರ್ಹ ಲೆಕ್ಕಪರಿಶೋಧಕರ ಪಟ್ಟಿಯಿಂದ ಒಬ್ಬರನ್ನು ಸಂಘದ 2013-14 ನೇ ಸಾಲಿನ ಮಹಾಸಭೆಯಲ್ಲಿ ಆಯ್ಕೆ ಮಾಡಿಕೊಂಡಿರುವ ಬಗ್ಗೆ ಮಾಹಿತಿಯನ್ನು ಮಹಾಸಭೆ ಮುಗಿದ 7 ದಿನಗಳ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರ ಕಚೇರಿ, ಬೆಂಗಳೂರು ಜಿಲ್ಲೆ, ಬೆಂಗಳೂರು ಕೊಠಡಿ ಸಂಖ್ಯೆ : 421, 422 ಒಂದನೇ ಗೇಟ್, 4ನೇ ಮಹಡಿ ಬಹುಮಹಡಿ ಕಟ್ಟಡ, ಡಾ: ಅಂಬೇಡ್ಕರ್ ವೀದಿ ಬೆಂಗಳೂರು -560 001 ಇವರಿಗೆ ಪತ್ರದ ಮೂಲಕ ಅಥವಾ ಕಚೇರಿ ಇಮೇಲ್ ddca_bng_ka@nic.in ಗೆ ಮಾಹಿತಿಯನ್ನು ಸಲ್ಲಿಸಬೇಕಾಗಿದೆ.

ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರನ್ನು ನೇಮಕ ಮಾಡಿಕೊಂಡು ಈ ಕಛೇರಿಗೆ ತಹಲ್‌ವರೆಗೂ ಮಾಹಿತಿ ಸಲ್ಲಿಸದಿದ್ದಲ್ಲಿ ಈ ಕೂಡಲೇ ವಾರ್ಷಿಕ ಮಹಾಸಭೆಯ ನಡುವಳಿಯ ಪ್ರತಿಯನ್ನು ಕಾರ್ಯದರ್ಶಿ ಹಾಗೂ ಅಧ್ಯಕ್ಷರ ಸಹಿಯೊಂದಿಗೆ ಈ ಕಚೇರಿಗೆ ಮರು ಟಪಾಲಿನಲ್ಲಿ ಸಲ್ಲಿಸಲು ಸೂಚಿಸಿದೆ. ತಪ್ಪಿದಲ್ಲಿ ತಿದ್ದುಪಡಿಯಾದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 63(2) ರ ಪ್ರಾವಿಸೋದನ್ವಯ ಪ್ರದತ್ತವಾದ ಅಧಿಕಾರದ ಮೇರೆಗೆ ನೀವು ಲೆಕ್ಕಪರಿಶೋಧನೆಗೆ ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರನ್ನು ನೇಮಕಮಾಡಿಕೊಳ್ಳದೇ ಇರುವುದರಿಂದ ಮತ್ತು ಕರ್ನಾಟಕ ಸಹಕಾರ ಸಹಕಾರ ಸಂಘಗಳ ನಿಯಮ 29-ಬಿ(8) ರನ್ವಯ ಲೆಕ್ಕಪರಿಶೋಧಕರನ್ನು ನೇಮಕ ಮಾಡಿಕೊಂಡಿರುವ ಬಗ್ಗೆ ಈ ಇಲಾಖೆ ತಿಳಿಯಪಡಿಸದೇ ಇರುವುದರಿಂದ ತಾವು ವಾರ್ಷಿಕ ಮಹಾಸಭೆಯಲ್ಲಿ ಲೆಕ್ಕಪರಿಶೋಧಕರನ್ನು ನೇಮಕ ಮಾಡಿಕೊಂಡಿರುವುದಿಲ್ಲವೆಂದು ಪರಿಭಾವಿಸಿ, ಇಲಾಖಾವತಿಯಿಂದ ತಮ್ಮ ಸಂಸ್ಥೆಯ ಲೆಕ್ಕಪರಿಶೋಧನೆಗಾಗಿ ಲೆಕ್ಕಪರಿಶೋಧಕರನ್ನು ನೇಮಿಸಲಾಗುವುದೆಂಬುದನ್ನು ಸ್ಪಷ್ಟಪಡಿಸುತ್ತಾ ಈ ಕುರಿತು ನಿಮ್ಮ ಹೇಳಿಕೆ/ಮಾಹಿತಿ ಏನಾದರೂ ಇದ್ದಲ್ಲಿ ಈ ಕೆಳಗೆ ಸಹಿ ಮಾಡಿರುವ ಅಧಿಕಾರಿಯವರ ಕಚೇರಿಗೆ 03 ದಿನಗಳೊಳಗಾಗಿ ಮಾಹಿತಿ ಸಲ್ಲಿಸಲು ತಿಳಿಯಪಡಿಸಿದೆ. ಇಲ್ಲವಾದಲ್ಲಿ ಈ ಸಂಬಂಧ ನೀವು ತಿಳಿಸಬೇಕಾಗಿರುವುದು ಏನು ಇಲ್ಲವೆಂದು ಪರಿಗಣಿಸಿ ನಿಮ್ಮ ಸಂಸ್ಥೆಯ

ಲೆಕ್ಕಪರಿಶೋಧನೆ ನಿರ್ವಹಿಸಲು ಇಲಾಖಾವತಿಯಿಂದ ಲೆಕ್ಕಪರಿಶೋಧಕರನ್ನು ನೇಮಿಸಲಾಗುವುದೆಂಬುದನ್ನು ಸ್ಪಷ್ಟಪಡಿಸಿದೆ.

ಬಾಬು/ಕೆಎಂ

## ಮಹಾರಾಣಿ ಕಲಾ ಕಾಲೇಜಿಗೆ ಬೆಳ್ಳಿಹಬ್ಬದ ಸಂಭ್ರಮ:

# ಹಳೇ ವಿದ್ಯಾರ್ಥಿನಿಯರ ಸಮಾಗಮ

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಬೆಂಗಳೂರಿನ ಮಹಾರಾಣಿ ಕಲಾ, ವಾಣಿಜ್ಯ ಮತ್ತು ನಿರ್ವಹಣಾ ಮಹಾವಿದ್ಯಾಲಯವು ಆರಂಭಗೊಂಡು 25 ವರ್ಷ ಕಳೆದಿದೆ. ಈಗ ಕಾಲೇಜಿಗೆ ಬೆಳ್ಳಿಹಬ್ಬದ ಸಂಭ್ರಮ. ಈ ಕಾಲೇಜಿನಲ್ಲಿ ವಿದ್ಯಾರ್ಜನೆ ಮಾಡಿದ ಹಲವಾರು ವಿದ್ಯಾರ್ಥಿನಿಯರು ರಾಜ್ಯ, ದೇಶ ಹಾಗೂ ವಿಶ್ವದೆಲ್ಲೆಡೆ ವಿವಿಧ ರಂಗಗಳಲ್ಲಿ ವಿಜೃಂಭಿಸುತ್ತಿದ್ದಾರೆ.

ಬೆಳ್ಳಿ ಹಬ್ಬದ ಸಂಭ್ರಮವು ಬರುವ 2015 ರ ಫೆಬ್ರವರಿಯಲ್ಲಿ ನಡೆಸಲು ಉದ್ದೇಶಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ವಿದ್ಯಾಭ್ಯಾಸ ಮಾಡಿರುವ ಹಳೆಯ ವಿದ್ಯಾರ್ಥಿನಿಯರೆಲ್ಲ ಒಟ್ಟುಗೂಡಿ ಬೆಳ್ಳಿಹಬ್ಬವನ್ನು ಸಡಗರ ಸಂಭ್ರಮದಿಂದ ಯೋಜಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಡಿಸೆಂಬರ್ 7ರ ಭಾನುವಾರ ಬೆಳಗ್ಗೆ 11-00 ಗಂಟೆಗೆ ಬೆಂಗಳೂರು ಶೇಷಾದ್ರಿ ರಸ್ತೆಯಲ್ಲಿರುವ ಮಹಾರಾಣಿ ಮಹಿಳಾ ಕಲಾ ವಾಣಿಜ್ಯ ಮತ್ತು ನಿರ್ವಹಣಾ ಮಹಾವಿದ್ಯಾಲಯದ ಮುಖ್ಯ ಕಟ್ಟಡದ ಎರಡನೇ ಮಹಡಿಯಲ್ಲಿರುವ ರಾಣಿ ಚೆನ್ನಮ್ಮ ಸಭಾಂಗಣದಲ್ಲಿ ಹಳೆ ವಿದ್ಯಾರ್ಥಿನಿಯರ ಸಮಾಗಮ-2014 ಸಭೆಯನ್ನು ಕರೆಯಲಾಗಿದೆ. ಕಾಲೇಜಿನಲ್ಲಿ ಅಭ್ಯಸಿಸಿದ ಎಲ್ಲ ವಿದ್ಯಾರ್ಥಿನಿಯರು ಈ ಸಭೆಗೆ ಹಾಜರಾಗಿ ಬೆಳ್ಳಿ ಹಬ್ಬದ ಆಚರಣೆಯಲ್ಲಿ ಹಳೆಯ ವಿದ್ಯಾರ್ಥಿನಿಯರು ವಹಿಸಬಹುದಾದ ಪಾತ್ರ ಜೊತೆಗೆ ಸಲಹೆ, ಸಮಾಲೋಚನೆ, ಸಹಕಾರ, ನಿರ್ದೇಶನ ಮತ್ತು ಧನಾತ್ಮಕ ಚಿಂತನೆಗಳು-ಆಲೋಚನೆಗಳನ್ನು ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲು ಆಗಮಿಸಲು ನಿಶ್ಚಯಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ಕಾಲೇಜಿನ ಡಾ: ಕೆ. ರಾಮಚಂದ್ರ,- 8197084806- drkrc@rediffmail.com, ಪ್ರೊ. ಎಂ. ಈಶ್ವರಪ್ಪ 98447 79946, eshwar.epss@gmail.com, ಡಾ: ಲಕ್ಷ್ಮಿ ಟಿ. -9448841323 mrs.lakshmi_t@rediffmail.com, ಪ್ರೊ. ಮಾಧವಿ ಕೆ. 8105606598 kudumula.madhavi@ymail.com ಹಾಗೂ ಪ್ರೊ. ಕೆ.ವಿ. ನಾರಾಯಣಸ್ವಾಮಿ – 9538955688 knnswamy18@gmail.com ಇವರುಗಳನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆಯಬಹುದೆಂದು ಕಾಲೇಜಿನ ಪ್ರಾಂಶುಪಾಲರು ವಿನಂತಿಸಿದ್ದಾರೆ.

ಹೆಚ್‌ಬಿಡಿ/ ಬಾಬು/ಕೆಎಂ

**ಛಾಯಾಚಿತ್ರ ಶೀರ್ಷಿಕೆ:**

ವಸತಿ ಖಾತೆ ಸಚಿವ ಡಾ: ಅಂಬರೀಶ್, ವಿಕಾಸಸೌದದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಹಿರಿಯ ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿದರು. ಸಭೆಯಲ್ಲಿ ವಸತಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀ ಸಂಜೀವ್‌ಕುಮಾರ್, ರಾಜೀವ್‌ಗಾಂಧಿ ವಸತಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಡಾ: ಜಗದೀಶ್ ಅವರು ಉಪಸ್ಥಿತರಿದ್ದರು.

## ಸಾರಿಗೆ ಅದಾಲತ್

ಬೆಂಗಳೂರು, ಡಿಸೆಂಬರ್ 2 (ಕರ್ನಾಟಕ ವಾರ್ತೆ)

ಬೆಂಗಳೂರು(ಪೂರ್ವ) ಇಂದಿರಾನಗರ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ಸಾರಿಗೆ ಅದಾಲತ್ ಕಾರ್ಯಕ್ರಮವು ಡಿಸೆಂಬರ್ ೫ ರ ಮಧ್ಯಾಹ್ನ ೩-೦೦ ಗಂಟೆಗೆ ಮೇಲ್ಕಂಡ ಕಚೇರಿಯಲ್ಲಿ ನಡೆಯಲಿದೆ. ಆಸಕ್ತ ಸಾರ್ವಜನಿಕರು ಇದರಲ್ಲಿ ಭಾಗವಹಿಸಿ ಇಲಾಖೆಗೆ ಸಂಬಂಧಿಸಿದ ತಮ್ಮ ಕುಂದುಕೊರತೆಗಳ ಬಗ್ಗೆ ಪರಿಹಾರ ಪಡೆಯಬಹುದಾಗಿದೆ.

ಬಾಬು/ಕೆಎಂ